ಕರ್ನಾಟಕ ಸರ್ಕಾರ

ಸಂಖ್ಯೆ:ಡಿವೈಎಸ್ಎಸ್/ಕ್ರೀಕಪಂ/27/ಕ್ರೀವಿವೇ/2016-17

ಯುವ ಸಬಲೀಕರಣ ಮತ್ತು ಕ್ರೀಡಾ ನಿರ್ದೇಶನಾಲಯ
ರಾಜ್ಯ ಯುವಕ ಕೇಂದ್ರ, ನೃಪತುಂಗ ರಸ್ತೆ,
ಬೆಂಗಳೂರು-1, ದಿನಾಂಕ:18-07-2016.

**ಸುತ್ತೋಲೆ**

ವಿಷಯ: 2016-17ನೇ ಸಾಲಿನಲ್ಲಿ ಪ್ರತಿಭಾವಂತ ಮಾಧ್ಯಮಿಕ/ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ವಾರ್ಷಿಕ ರೂ.10,000/- ರಂತೆ ಪ್ರೋತ್ಸಾಹಿತ ಕ್ರೀಡಾ ವಿದ್ಯಾರ್ಥಿವೇತನ ನೀಡಲು ಅರ್ಜಿಗಳನ್ನು ಸಲ್ಲಿಸುವ ಬಗ್ಗೆ.

☆☆☆☆☆

ರಾಜ್ಯ ಸರ್ಕಾರದ ಯೋಜನೆಯಡಿ ಪ್ರತಿಭಾವಂತ ವಿದ್ಯಾರ್ಥಿ ಕ್ರೀಡಾಪಟುಗಳನ್ನು ಪ್ರೋತ್ಸಾಹಿಸುವ ಸಲುವಾಗಿ ಮಾಧ್ಯಮಿಕ/ಪ್ರೌಢಶಾಲಾ ವಿದ್ಯಾರ್ಥಿ ಕ್ರೀಡಾಪಟುಗಳಿಗೆ ವಾರ್ಷಿಕ ರೂ. 10,000/- ದಂತೆ ಪ್ರೋತ್ಸಾಹಿತ ಕ್ರೀಡಾ ವಿದ್ಯಾರ್ಥಿ ವೇತನವನ್ನು ನೀಡುವ ಯೋಜನೆ ಇಲಾಖೆಯಲ್ಲಿ ಜಾರಿಯಲ್ಲಿದ್ದು, ಈ ಯೋಜನೆಯನ್ವಯ ಪ್ರಸ್ತುತ ಮಾಧ್ಯಮಿಕ ಅಥವಾ ಪ್ರೌಢಶಾಲೆಯಲ್ಲಿ ಓದುತ್ತಿರುವ ಕ್ರೀಡಾಪಟುಗಳಿಗೆ ವಿದ್ಯಾರ್ಥಿವೇತನ ನೀಡಲಾಗುವುದು. ಸದರಿ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸಲು ಕ್ರೀಡಾಪಟು ಈ ಕೆಳಗಿನ ಅರ್ಹತೆಗಳನ್ನು ಹೊಂದಿರಬೇಕಾಗಿದ್ದು, ಅರ್ಜಿ ನಮೂನೆ ಅರ್ಹತಾ ಮಾರ್ಗಸೂಚಿ ಹಾಗೂ ಹೆಚ್ಚಿನ ವಿವರಗಳಿಗೆ ವೆಬ್‌ಸೈಟ್ ವಿಳಾಸ www.karnatakayouthportal.in ಸಂಪರ್ಕಿಸುವುದು. ಭರ್ತಿ ಮಾಡಿದ ಅರ್ಜಿಗಳನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ, ಬೆಂಗಳೂರು ಅಥವಾ ಆಯಾ ಜಿಲ್ಲೆಗಳ ಉಪ/ಸಹಾಯಕ ನಿರ್ದೇಶಕರ ಕಛೇರಿಗೆ ಸಲ್ಲಿಸಬಹುದಾಗಿದೆ. ಇದರೊಂದಿಗೆ ಲಗತ್ತಿಸಿರುವ ಅರ್ಜಿ ನಮೂನೆಯಲ್ಲಿ ಭರ್ತಿ ಮಾಡಿ ಅರ್ಜಿಗಳನ್ನು ದಿನಾಂಕ 31-08-2016 ರ ಒಳಗಾಗಿ ನಿರ್ದೇಶಕರು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು ಇವರಿಗೆ ಜಿಲ್ಲೆಯ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಮೂಲಕ ಸಲ್ಲಿಸಲು ಕೋರಲಾಗಿದೆ.

1) ಅರ್ಜಿದಾರರು 2015-16 ನೇ ಸಾಲಿನಲ್ಲಿ ವಿದ್ಯಾರ್ಥಿಯಾಗಿದ್ದು, ಮಾಧ್ಯಮಿಕ ಅಥವಾ ಪ್ರೌಢಶಾಲೆಯಲ್ಲಿ ಓದುತ್ತಿರಬೇಕು.

2) ಅರ್ಜಿದಾರರು ರಾಜ್ಯ ಕ್ರೀಡಾ ಪ್ರಾಧಿಕಾರದಲ್ಲಿ ನೊಂದಾಯಿತವಾದ ಕ್ರೀಡಾ ಸಂಸ್ಥೆಗಳು ದಿನಾಂಕ 01-01-2015 ರ ನಂತರ ನಡೆಸಿದ ರಾಜ್ಯ ಮಟ್ಟದ ಸ್ಪರ್ಧೆಗಳಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆದಿರಬೇಕು ಅಥವಾ ರಾಷ್ಟ್ರೀಯ ಮಟ್ಟದ ಪಂದ್ಯಾವಳಿಗಳಲ್ಲಿ ಭಾಗವಹಿಸಿರಬೇಕು. ಅಂದರೆ ಕ್ರೀಡಾ ಪಂದ್ಯಾವಳಿಗಳಲ್ಲಿನ ದಿನಾಂಕ 01-01-2015 ರಿಂದ 31-12-2015 ರ ಸಾಧನೆಯನ್ನು ಮಾತ್ರ ಪರಿಗಣಿಸಲಾಗುವುದು.

3) ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ನಡೆಸಿದ ರಾಜ್ಯ ಮಟ್ಟದ ಗ್ರಾಮೀಣ ಕ್ರೀಡಾಕೂಟ ಹಾಗೂ ಮಹಿಳಾ ಕ್ರೀಡಾಕೂಟದಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆದಿದ್ದಲ್ಲಿ ಅಥವಾ ರಾಷ್ಟ್ರೀಯ ಗ್ರಾಮೀಣ/ಮಹಿಳಾ ಕ್ರೀಡಾಕೂಟದಲ್ಲಿ ರಾಜ್ಯ ತಂಡವನ್ನು ಪ್ರತಿನಿಧಿಸಿ ಭಾಗವಹಿಸಿದ್ದಲ್ಲಿ ಅಂತಹ ಕ್ರೀಡಾಪಟುಗಳು ಅರ್ಜಿ ಸಲ್ಲಿಸಬಹುದಾಗಿದೆ.

4) ಸಾರ್ವಜನಿಕ ಶಿಕ್ಷಣ ಇಲಾಖೆಯು ನಡೆಸುವ ಸ್ಕೂಲ್ ಗೇಮ್ಸ್ ಫೆಡರೇಷನ್ ಆಫ್ ಇಂಡಿಯಾ ಯೋಜನೆಯಡಿಯಲ್ಲಿ ನಡೆಸಿದ ರಾಜ್ಯ ಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆದಿದ್ದಲ್ಲಿ ಅಥವಾ ರಾಷ್ಟ್ರೀಯ ಶಾಲಾ ಕ್ರೀಡಾಕೂಟದಲ್ಲಿ ರಾಜ್ಯ ತಂಡವನ್ನು ಪ್ರತಿನಿಧಿಸಿ ಭಾಗವಹಿಸಿದ್ದಲ್ಲಿ ಅಂತಹ ಕ್ರೀಡಾಪಟುಗಳು ಅರ್ಜಿ ಸಲ್ಲಿಸಬಹುದಾಗಿದೆ.

. . . . . . . 2

5) ಒಬ್ಬ ಕ್ರೀಡಾಪಟು ಒಂದಕ್ಕಿಂದ ಹೆಚ್ಚು ಕ್ರೀಡೆಗಳಲ್ಲಿ ಭಾಗವಹಿಸಿದ್ದರೂ ಸಹ ವಾರ್ಷಿಕ ಒಂದೇ ಸ್ಕಾಲರ್ ಷಿಪ್ ಮೊತ್ತಕ್ಕೆ ಮಾತ್ರ ಅರ್ಹರಿರುತ್ತಾರೆ.

6) ವಿದ್ಯಾರ್ಥಿ ವೇತನದ ಮೊತ್ತವನ್ನು ವಾರ್ಷಿಕ ರೂ. 10,000-00 ಗಳನ್ನು ಮಾತ್ರ ಮಂಜೂರು ಮಾಡಲಾಗುವುದು.

7) ಅರ್ಜಿಗಳನ್ನು ದಿನಾಂಕ 31-08-2016 ರ ಒಳಗೆ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು ಇವರ ಕಛೇರಿಗೆ ತಲುಪುವಂತೆ ಕಳುಹಿಸಬೇಕು. ತಡವಾಗಿ ಬಂದ ಅರ್ಜಿಗಳನ್ನು ಯಾವುದೇ ಕಾರಣ ನೀಡದೆ ತಿರಸ್ಕರಿಸಲಾಗುವುದು ಮತ್ತು ಈ ಬಗ್ಗೆ ಪತ್ರ ವ್ಯವಹಾರವನ್ನು ಗಣನೆಗೆ ತೆಗೆದುಕೊಳ್ಳುವುದಿಲ್ಲ.

ಆಯಾ ಜಿಲ್ಲೆಯ ಉಪ/ಸಹಾಯಕ ನಿರ್ದೇಶಕರುಗಳು ಮೇಲೆ ವಿವರಿಸಿದ ಅಂಶಗಳನ್ನು ಗಮನದಲ್ಲಿಟ್ಟು ವೈಯಕ್ತಿಕ ಆಸಕ್ತಿ ವಹಿಸಿ ಅರ್ಹ ವಿದ್ಯಾರ್ಥಿಗಳ ಅರ್ಜಿಯನ್ನು ಪರಿಸೀಲಿಸಿ ಅರ್ಹ ಅರ್ಜಿಗಳನ್ನು ಮಾತ್ರ ಶಿಫಾರಸ್ಸು ಮಾಡಲು ಹಾಗೂ ಶೀಫಾರಸು ಮಾಡಲಾದ ಕ್ರೀಡಾಪಟುಗಳಿಂದ ರೂ: 10,000/- ಗಳಿಗೆ ಆಯಾ ಶಾಲೆಯ ಮುಖ್ಯೋಪಾಧ್ಯಾಯರ ಮುಖಾಂತರ ಮುಂಗಡ ರಸೀದಿಯನ್ನು ತಪ್ಪದೇ ಪಡೆದು ಕಳುಹಿಸಿಕೊಡುವಂತೆ ಸೂಚಿಸಲಾಗಿದೆ.

ನಿರ್ದೇಶಕರು,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ,

ಗೆ,

1. ಎಲ್ಲಾ ಜಿಲ್ಲೆಯ ಸಹಾಯಕ ನಿರ್ದೇಶಕರು, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ.
2. ಕೇಂದ್ರ ಕಛೇರಿಯ ಎಲ್ಲಾ ಜಂಟಿ ನಿರ್ದೇಶಕರು/ಉಪ ನಿರ್ದೇಶಕರುಗಳಿಗೆ.
3. ಉಪ ನಿರ್ದೇಶಕರು, ದೈಹಿಕ ಶಿಕ್ಷಣ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ರಾಜ್ಯದ ಎಲ್ಲಾ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರು ಎಲ್ಲಾ ಮಾಧ್ಯಮಿಕ/ಪ್ರೌಢಶಾಲೆಗಳಿಗೆ ಈ ಸುತ್ತೋಲೆಯಲ್ಲಿ ಲಗತ್ತಿಸಿದ ಅರ್ಜಿ ನಮೂನೆಯೊಂದಿಗೆ ಸೂಚನೆ ನೀಡಲು ಕೋರಲಾಗಿದೆ.
5. ಹೆಚ್ಚುವರಿ ಪ್ರತಿ.

ಮನವಿದಾರ
ಕ್ರೀಡಾಪಟುವಿನ
ಪಾಸ್‌ಪೋರ್ಟ್
ಅಳತೆ

__________ ನೇ ಸಾಲಿನ ಮಾಧ್ಯಮಿಕ/ ಪ್ರೌಢಶಾಲಾ ವಿದ್ಯಾರ್ಥಿ:
…ದ್ಯಾರ್ಥಿನಿಯರಿಗೆ ಪ್ರೋತ್ಸಾಹಿಕ ಕ್ರೀಡಾ ಸ್ಕಾಲರ್ ಷಿಪ್ ಅರ್ಜಿ ನಮೂನೆ.

ಮುಖ್ಯೋಪಾಧ್ಯಾಯರ ಸಹಿ ಮತ್ತು ಮುದ್ರೆ

| | | |
|---|---|---|
| 1. | ಅರ್ಜಿದಾರರ ಹೆಸರು ಸ್ಪಷ್ಟವಾಗಿ | |
| 2. | ತಂದೆ/ ಪೋಷಕರ ಹೆಸರು | |
| 3. | ಈಗಿನ ಅಂಚೆ ವಿಳಾಸ (ಮನೆ) | |
| 4 | ಜಾತಿ | |
| 5 | ಲಿಂಗ | |
| 6 | ಅವನು/ ಅವಲು ಪ್ರಥಮ ಸ್ಥಾನ ಗಳೀಸಿದ ಕ್ರೀಡೆಯ ಹೆಸರು ಅಥವಾ ಭಾಗವಹಿಸಿದ ರಾಷ್ಟ್ರೀಯ ಪಂದ್ಯಾವಳಿ( ಪ್ರಾಮಾಣ ಪತ್ರದ ಪ್ರತಿ ಲಗತ್ತಿಸಬೇಕು) | |
| 7. | ಸ್ಪರ್ಧೆಯ ಹೆಸರು. ನಡೆದ ಸ್ಥಳ ಮತ್ತು ದಿನಾಂಕ. | |
| 8 | ಅರ್ಜಿದಾರರು ಅಭ್ಯಾಸ ಮಾಡುತ್ತಿರುವ ಶಾಲೆಯ ಹೆಸರು ಮತ್ತು ವಿಳಾಸ. | |
| 9 | ಅವನು/ ಅವಳು/ ಓದುತ್ತಿರುವ ತರಗತಿ | |
| 10 | ಜನ್ಮ ದಿನಾಂಕ | |
| 11 | ಮುಖ್ಯೋಪಾಧ್ಯಾಯರ ಹೆಸರು | |
| 12 | ಅರ್ಜಿದಾರರು ಬೇರೆ ಯಾವುದಾದರೂ ಕ್ರೀಡಾ ವಿದ್ಯಾರ್ಥಿವೇತನವನ್ನು ಪಡೆಯುತ್ತಿದ್ದಾನೆಯೇ? ಹಾಗಿದ್ದಲ್ಲಿ ಈ ಕೆಳಕಂಡ ವಿವರ ಒದಗಿಸುವುದು.<br>ಅ) ಕ್ರೀಡಾ ವಿದ್ಯಾರ್ಥಿವೇತನದ ಮಾಸಿಕ ಮೌಲ್ಯ<br>ಆ) ಕ್ರೀಡಾ ವಿದ್ಯಾರ್ಥಿವೇತನವನ್ನು ಪಡೆಯುತ್ತಿರುವ ಅವಧಿ. | |
| 13 | ಬ್ಯಾಂಕ್ ಖಾತೆಯ ವಿವರ<br>ಪಾಸ್ ಪುಸ್ತಕದ ನಕಲು ಪ್ರತಿ ಅಥವಾ ರದ್ದುಪಡಿಸಿದ ಚೆಕ್‌ನ್ನು ಲಗತ್ತಿಸತಕ್ಕದ್ದು.<br>(ವಿದ್ಯಾರ್ಥಿಗಳ/ಕ್ರೀಡಾಪಟುಗಳ ಹೆಸರಿನಲ್ಲಿರುವ ಬ್ಯಾಂಕ್ ಪಾಸ್ ಬುಕ್ ಜೇರಾಕ್ಸ್ ಪ್ರತಿಯನ್ನು ನೀಡುವುದು ಮತ್ತು ಕ್ರೀಡಾಪಟುಗಳು ಸರಿಯಾದ ಖಾತೆ ನಂಬರ್ ಮತ್ತು ಐ.ಎಫ್.ಎಸ್.ಸಿ ನಂಬರ್ ಕೊಡದೇ ಇದ್ದರೆ ಅಂತಹ ಕ್ರೀಡಾಪಟುಗಳ ಅರ್ಜಿಯನ್ನು ತಿರಸ್ಕರಿಸಲಾಗುವುದು.) | ಖಾತೆದಾರರ ಹೆಸರು:<br>ಬ್ಯಾಂಕ್ ಹೆಸರು<br>ಬ್ರಾಂಚ್<br>ಬ್ಯಾಂಕ್ ಖಾತೆ ಸಂಖ್ಯೆ:<br>ಐಎಫ್ಎಸ್‌ಸಿ ಕೋಡ್: |

ನಾನು ಈ ಮೂಲಕ ಘೋಷಿಸುವುದೇನೆಂದರೆ ಪ್ರೋತ್ಸಾಹಿತ ಕ್ರೀಡಾ ವಿದ್ಯಾರ್ಥಿವೇತನ ಪಡೆಯಲು ನನ್ನನ್ನು ಆಯ್ಕೆ ಮಾಡಿದ ಪಕ್ಷದಲ್ಲಿ ನನ್ನ ಕ್ರೀಡೆಯಲ್ಲಿ ಮತ್ತು ವಿದ್ಯಾಭ್ಯಾಸದಲ್ಲಿ ಉನ್ನತ ಪ್ರವೀಣ್ಯವನ್ನು ಗಳಿಸಲು ಪೂರ್ಣ ಗಮನ ಹರಿಸುತ್ತೇನೆ.

ಸ್ಥಳ

ದಿನಾಂಕ:

ವಿದ್ಯಾರ್ಥಿ: ಕ್ರೀಡಾಪಟುವಿನ ಸಹಿ.

## ಘೋಷಣೆ

--------------ಅವರ ಮಗ/ಮಗಳು ಆದ------------ಅವರು ಈ ಶಾಲೆಯಲ್ಲಿ ---------ನೇ ಸಾಲಿನಲ್ಲಿ ----------- ತರಗತಿಯಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿನಿಯಾಗಿರುತ್ತಾರೆಂದು ದೃಢೀಕರಿಸುತ್ತೇನೆ. ಅವರ ಜನ್ಮ ದಿನಾಂಕ ಈ ಶಾಲೆಯ ದಾಖಲೆಯ ಪ್ರಕಾರ-------------------------- ಆಗಿರುತ್ತದೆ.

ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮುದ್ರೆ.

## ಸಾಧನಾ ಪ್ರಮಾಣ ಪತ್ರ

ಕುಮಾರ/ ಕುಮಾರಿ ---------------------------------------- ಇವರು ---------------------- ಸ್ಥಳದಲ್ಲಿ ದಿನಾಂಕ ------------------------ ರಿಂದ ----------------------ರ ವರೆಗೆ ನಡೆದ ------------------ ಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಿದ್ದು ಪ್ರಥಮ ಸ್ಥಾನ ಪಡೆದಿರುತ್ತಾರೆಂದು ಪ್ರಮಾಣೀಕರಿಸುತ್ತೇನೆ.

ಸಹಿ ಮತ್ತು ಮುದ್ರೆ
ಸಹಾಯಕ ನಿರ್ದೇಶಕರು,
ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ
--------------- ಜಿಲ್ಲೆ

ಸಹಿ ಮತ್ತು ಮುದ್ರೆ
ಕಾರ್ಯದರ್ಶಿಗಳು ಕ್ರೀಡಾ ಸಂಸ್ಥೆ,
---------------ಜಿಲ್ಲೆ